**ಮುಖ್ಯ ನ್ಯಾಯಿಕ ದಂಡಾಧಿಕಾರಿಗಳ ನ್ಯಾಯಾಲಯ, ಹಾವೇರಿ.**

**ಸಿ.ಸಿ.ನಂ.40/2017**

| | | | |
|---|---|---|---|
| ಸಾಕ್ಷಿದಾರರ ಹೆಸರು | ಮೆಹಬೂಬಸಾಬ ಅತ್ತಾರ | ಸಿಡಬ್ಲ್ಯೂ | 9 |
| ತಂದೆ ಹೆಸರು | ಮಹಮ್ಮದಸಾಬ | ಪಿಡಬ್ಲ್ಯೂ | 4 |
| ವಯಸ್ಸು | 70 ವರ್ಷ | | |
| ಉದ್ಯೋಗ | ಖಾಸಗಿ ಕೆಲಸ | | |
| ವಾಸಸ್ಥಳ | ಜಯದೇವನಗರ, ಹಾವೇರಿ | | |

**ದಿಃ 06.03.2026 ರಂದು ಸಾಕ್ಷಿದಾರರಿಗೆ ಪ್ರಮಾಣ ವಚನ ಬೋಧಿಸಲಾಯಿತು.**

**ಮುಖ್ಯ ವಿಚಾರಣೆಃ ಹಿ.ಸ.ಸ.ಅಭಿಯೋಜಕರಿಂದ.**

1). ಆರೋಪಿಗಳು ಇಬ್ಬರೂ ಯಾರ ಮಕ್ಕಳು ಎಂದು ಈಗ ತಿಳಿದುಕೊಂಡಿದ್ದೇನೆ. ಈ ಪ್ರಕರಣಕ್ಕೆ ಸಂಬಂದಪಟ್ಟಂತೆ ಏನೆಲ್ಲ ಘಟನೆಗಳು ಜರುಗಿರುತ್ತವೆ ಎಂದು ನನಗೆ ಗೊತ್ತಿರುವದಿಲ್ಲ ಮತ್ತು ಈ ಪ್ರಕರಣಕ್ಕೆ ಸಂಬಂದಪಟ್ಟಂತೆ ಪೊಲೀಸರ ಸಮಕ್ಷಮ ಯಾವುದೇ ಹೇಳಿಕೆ ಕೊಟ್ಟಿಲ್ಲ. ಆರೋಪಿಗಳಿಗೆ ಮತ್ತು ಅವರ ಸಂಬಂಧಿಕರಿಗೆ ಸಂಬಂದಪಟ್ಟಂತೆ ಆಸ್ತಿಯ ಪ್ರಕರಣದ ಬಗ್ಗೆ ನನಗೆ ಮಾಹಿತಿ ಇರುವದಿಲ್ಲ.

**(ಈ ಹಂತದಲ್ಲಿ ಸಾಕ್ಷಿಯನ್ನು ಪ್ರತಿಕೂಲ ಸಾಕ್ಷಿ ಎಂದು ಪರಿಗಣಿಸಿ ಪಾಟೀ ಸವಾಲು ಮಾಡಲು ಅನುಮತಿ ಕೋರಿದ್ದರಿಂದ, ಪರಿಶೀಲಿಸಿ ಅನುಮತಿ ನೀಡಲಾಯಿತು)**

**ಪಾಟೀ ಸವಾಲುಃ ಹಿ.ಸ.ಸ.ಅಭಿಯೋಜಕರಿಂದ.**

2) ಚಾ.ಸಾ-1,5 ರಿಂದ 7 ಮತ್ತು 1ನೇ ಆರೋಪಿಗೆ ಸಂಬಂದಪಟ್ಟಂತಹ ಆಸ್ತಿಯ ಕುರಿತಾಗಿ ಒಂದು ಖೊಟ್ಟಿಯಾಗಿ ತೋರಿಸಿದ ದಾನಪತ್ರದ ಕುರಿತಾಗಿ ಇದ್ದಂತಹ ಪ್ರಕರಣದ ಬಗ್ಗೆ ನನಗೆ ಮಾಹಿತಿ ಇದ್ದರೂ ಸಹ ಆರೋಪಿತರಿಗೆ ಸಹಾಯ ಮಾಡಲು ಸುಳುಳ ಸಾಕ್ಷಿ ಹೇಳುತ್ತಿದ್ದೇನೆಅ ಂದರೆ

ಸರಿಯಲ್ಲ. ಪೊಲೀಸರ ಸಮಕ್ಷಮ ಹೇಳಿಕೆ ಕೊಟ್ಟಿದ್ದರೂ ಹೇಳಿಕೆ ಕೊಟ್ಟಿಲ್ಲ ಎಂದು ಸುಳುಳ ಸಾಕ್ಷಿ ಹೇಳುತ್ತಿದ್ದೇನೆ ಅಂದರೆ ಸರಿಯಲ್ಲ. ಸದರಿ ಹೇಳಿಕೆಯನ್ನು ನಿ.ಪಿ-5 ಎಂದು ಗುರುತಿಸಲಾಯಿತು. ಸದರಿ ಖೊಟ್ಟಿಯಾಗಿ ಸೃಷ್ಟಿಸಿದ ಭಕ್ಷೀಸ ಪತ್ರಕ್ಕೆ ನಾನು ಕೂಡ ಸಹಿ ಮಾಡಿದ್ದೇನೆ ಅಂದರೆ ಸರಿಯಲ್ಲ. ಪೊಲೀಸರ ಸಮಕ್ಷಮ ಸದರಿ ಖೊಟ್ಟಿಯಾಗಿ ತಯಾರಿಸಿದ ದಾನಪತ್ರವನ್ನು ತೋರಿಸಲಾಗಿ ಅದರಲ್ಲಿ ಖೊಟ್ಟಿಯಾಗಿ ಸಹಿ ಮಾಡಿದ ವ್ಯಕ್ತಿಯ ಸಹಿಯನ್ನು ತೋರಿಸಿ ನನ್ನ ಹೇಳಿಕೆ ಪಡೆದಿರುತ್ತಾರೆ ಅಂದರೆ ಸರಿಯಲ್ಲ. ನನಗೆ ನಿ.ಪಿ-5 ಹಾಗೂ ಖೊಟ್ಟಿಯಾಗಿ ತಯಾರಿಸಲಾಗಿದೆ ಎಂದು ಹೇಳುವ ಭಕ್ಷೀಸ ಪತ್ರದ ಬಗ್ಗೆ ಸಂಪೂರ್ಣ ಮಾಹಿತಿ ಇದ್ದರೂ ಸಹ ಆರೋಪಿತರಿಗೆ ಸಹಾಯ ಮಾಡಲು ಸುಳ್ಳು ಸಾಕ್ಷಿ ಹೇಳುತ್ತಿದ್ದೇನೆ ಅಂದರೆ ಸರಿಯಲ್ಲ. ನಾನು ಆರೋಪಿಗಳಿಗೆ ನಿಷ್ಟುರ ಆಗಬಾರದೆಂದು ಸುಳ್ಳು ಸಾಕ್ಷಿ ಹೇಳುತ್ತಿದ್ದೇನೆ ಅಂದರೆ ಸರಿಯಲ್ಲ.

**ಪಾಟೀ ಸವಾಲುಃ ಆರೋಪಿ ಪರವಾಗಿ ಪಾಟೀ ಸವಾಲು ಇರುವದಿಲ್ಲ ಎಂದು ತಿಳಿಸಿರುತ್ತಾರೆ.**

**ಮರು ವಿಚಾರಣೆ ಇಲ್ಲಾ.**

(ತೆರೆದ ನ್ಯಾಯಾಲಯದಲ್ಲಿ ನನ್ನ ಉಕ್ತ ಲೇಖನದ ಮೇರೆಗೆ ಬೆರಳಚ್ಚು ಮಾಡಲಾಯಿತು)

ನ. ಸ. ಓ. ಹೇ. ಕೇ. ಸರಿ ಇದೆ.
ಎಂದು ಒಪ್ಪಿರುತ್ತಾರೆ.

ಮುಖ್ಯ ನ್ಯಾಯಿಕ ದಂಡಾಧಿಕಾರಿಗಳು
ಹಾವೇರಿ.

ಸಿ.ಡಬ್ಲೂ-9, ಪಿ.ಡಬ್ಲೂ-4